

ಭಾರತ ಮತ ಮಹಾ ಸಮರ

## ಸಮಾಚಾರ ಸಣ್ಣದಲ್ಲ

### ನನ್ನ ಮಗನಿಗೆ ಟಿಕೆಟ್ ತಪ್ಪಿಸಿದ್ದು ಬಿಎಸ್‌ವೈ



**ಚಿತ್ರದುರ್ಗ:** ಪುತ್ರ ರಘುಚಂದನ್‌ಗೆ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಟಿಕೆಟ್ ಕೈತಪ್ಪಲು ಮಾಜಿ ಸಿಎಂ ಬಿ.ಎಸ್ ಯಡಿಯೂರಪ್ಪ ಅವರೇ ಕಾರಣ ಎಂದು ಹೊಳಲ್ಕೆರೆ ಶಾಸಕ ಎಂ. ಚಂದ್ರಪ್ಪ ಆಕ್ರೋಶ ಹೊರ ಹಾಕಿದ್ದಾರೆ. ಸುದ್ದಿಗಾರ ರೊಂದಿಗೆ ಮಾತನಾಡಿ, ರಾಜ್ಯದ 27 ಕ್ಷೇತ್ರಗಳ ಬಿಜೆಪಿ ಟಿಕೆಟ್ ಘೋಷಣೆಯಾದರೂ ಸಹ ಚಿತ್ರದುರ್ಗ ಕ್ಷೇತ್ರದ ಟಿಕೆಟ್ ಮಾತ್ರ ಬಾಕಿಯಾಗಿತ್ತು. ಇದೀಗ ಮಾಜಿ ಡಿಸಿಎಂ ಗೋವಿಂದ ಕಾರಜೋಳ ಅವರಿಗೆ ಬಿಜೆಪಿ ಮಣೆ ಹಾಕಿದೆ. ಪುತ್ರನಿಗೆ ಟಿಕೆಟ್ ಕೈತಪ್ಪಿದ್ದು, ಇದಕ್ಕೆ ಬಿಎಸ್‌ವೈ ಕಾರಣ ಎಂದು ಅವರು ಕಿಡಿಕಾರಿದ್ದಾರೆ. ಗೋವಿಂದ ಕಾರಜೋಳ ಜತೆ ಅದೇನು ಹೊಂದಾಣಿಕೆ ಇದೆಯೋ ಗೊತ್ತಿಲ್ಲ. ಹೀಗಾಗಿ ಅವರಿಗೆ ಟಿಕೆಟ್ ನೀಡದಿದ್ರೆ ನಾನು ರಾಜ್ಯಾದ್ಯಂತ ಬಿಜೆಪಿ ಪರ ಪ್ರಚಾರ ಮಾಡುವುದಿಲ್ಲ ಎಂದು ಪಟ್ಟು ಹಿಡಿದು, ಬಿಜೆಪಿ ರಾಷ್ಟ್ರೀಯ ಅಧ್ಯಕ್ಷ ನಡ್ಡಾ ಅವರಿಗೆ ದಂಬಾಲು ಬಿದ್ದು, ಕಾರಜೋಳ ಅವರಿಗೆ ಟಿಕೆಟ್ ಕೊಡಿಸಿದ್ದಾರೆ. ಹೀಗಾಗಿ ನಾನು ಯಡಿಯೂರಪ್ಪ ಕುಟುಂಬಕ್ಕೆ ತೋರಿದ ನಿಷ್ಠೆ ಸಾರ್ಥಕವೆನಿಸಿದೆ ಎಂದು ವ್ಯಂಗ್ಯವಾಡಿದ್ದಾರೆ.

### ಬ್ಲಾಕ್ ಮೇಲ್ ಮಾಡಿ ಮತ ಸೆಳೆಯುವ ಯತ್ನ




**ಹೊಸಪೇಟೆ:** ಬ್ಲಾಕ್‌ಮೇಲ್ ಮಾಡಿ ಮಹಿಳಾ ಮತ ಸೆಳೆಯುವ ಪ್ರಯತ್ನ ಕಾಂಗ್ರೆಸ್ ನಡೆಸಿದೆ ಎಂದು ಬಿಜೆಪಿ ರಾಜ್ಯ ಮಹಿಳಾ ಮೋರ್ಚಾ ಅಧ್ಯಕ್ಷೆ ಮಂಜುಳಾ ಆರೋಪಿಸಿದರು. ಗುರುವಾರ ಮಹಿಳಾ ಮೋರ್ಚಾ ಕಾರ್ಯಕಾರಿಣಿಯಲ್ಲಿ ಮಾತನಾಡಿದ ಅವರು, ಕಾಂಗ್ರೆಸ್ ಅಭ್ಯರ್ಥಿ ಸೋತರೆ ಮಹಿಳೆಯರಿಗೆ ನೀಡಲಾಗುತ್ತಿರುವ ಸೌಲಭ್ಯ ಕಡಿತವಾಗಲಿದೆ. ಸರಕಾರ ಗ್ಯಾರಂಟಿ ಯೋಜನೆ ಜಾರಿಗೊಳಿಸುವುದಕ್ಕೆ ಮೊದಲಾಗಿಯೇ ಮೋದಿ ಸರಕಾರ ಮಹಿಳೆಯರಿಗೆ ಅನುಕೂಲವಾಗುವ ಹಲವು ಯೋಜನೆಗಳನ್ನು ಜಾರಿಗೆ ತಂದಿದೆ. ಶೌಚಾಲಯ ನಿರ್ಮಾಣಕ್ಕೆ 12 ಸಾವಿರ, ಉಜ್ವಲ ಗ್ಯಾಸ್ ಯೋಜನೆಯಲ್ಲಿ 9 ಸಾವಿರ, ಆಯುಷ್ಮಾನ್ ಯೋಜನೆಯಲ್ಲಿ ಪ್ರತಿ ಕುಟುಂಬಕ್ಕೆ 5 ಲಕ್ಷ ವೈದ್ಯಕೀಯ ವೆಚ್ಚದ ಗ್ಯಾರಂಟಿ ಲಭಿಸಿದೆ. ಇದನ್ನು ಜನರಿಗೆ ಮನವರಿಕೆ ಮಾಡುವ ಕೆಲಸವನ್ನು ಪಕ್ಷದ ಕಾರ್ಯಕರ್ತರು ಮಾಡಬೇಕು ಎಂದರು.

### ಗಂಡು ಮೆಟ್ಟಿದ ನಾಡಲ್ಲಿ ಗಂಡಸರೇ ಇಲ್ಲವಾ?



**ಚಿತ್ರದುರ್ಗ:** ತೀವ್ರ ಕುತೂಹಲ ಕೆರಳಿಸಿದ್ದ ಪರಿಶಿಷ್ಟ ಜಾತಿಗೆ ಮೀಸಲಾಗಿರುವ ಚಿತ್ರದುರ್ಗ ಲೋಕಸಭಾ ಕ್ಷೇತ್ರದ ಬಿಜೆಪಿ ಟಿಕೆಟ್ ಮಾಜಿ ಉಪಮುಖ್ಯಮಂತ್ರಿ ಗೋವಿಂದ ಕಾರಜೋಳ ಅವರಿಗೆ ಘೋಷಣೆಯಾದ ಬೆನ್ನಲ್ಲೇ ಕ್ಷೇತ್ರದಲ್ಲಿ ಅಸಮಾಧಾನ ಭುಗಿಲೆದ್ದಿದೆ. ಟಿಕೆಟ್ ಸಿಗುವ ಹುಮ್ಮಸ್ಸಿನಲ್ಲಿದ್ದ ಶಾಸಕ ಎಂ.ಚಂದ್ರಪ್ಪ ಅವರ ಪುತ್ರ ಎಂ.ಸಿ.ರಘುಚಂದನ್ ಗುರುವಾರ ಬಹಿರಂಗವಾಗಿ ಪಕ್ಷದ ನಡೆ ಹಾಗೂ ಮಾಜಿ ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಹಾಗೂ ಪಕ್ಷದ ರಾಜ್ಯ ಘಟಕದ ಅಧ್ಯಕ್ಷ ಬಿ.ವೈ. ವಿಜಯೇಂದ್ರ ವಿರುದ್ಧ ಆಕ್ರೋಶ ಹೊರ ಹಾಕಿದರು. ಪಕ್ಷದ ಹೈಕಮಾಂಡ್ ಗೋವಿಂದ ಕಾರಜೋಳ ಅವರನ್ನು ಕಣಕ್ಕಿಳಿಸಿರುವುದು ಖಂಡನೀಯ. ಶುಕ್ರವಾರ ಬೆಂಬಲಿಗರ ಸಭೆ ಕರೆದು ಮುಂದಿನ ತೀರ್ಮಾನ ಪ್ರಕಟಿಸಲಾಗುತ್ತದೆ. ಇದೀಗ ಮುಧೋಳದಲ್ಲಿ ಸೋತ ವ್ಯಕ್ತಿಯನ್ನು ಕರೆತಂದು ಅಭ್ಯರ್ಥಿ ಮಾಡಿದ್ದಾರೆ. ಗಂಡು ಮೆಟ್ಟಿದ ನಾಡಲ್ಲಿ ಗಂಡಸರೇ ಇಲ್ಲವಾ? ಎಂದು ಅವರು ಪ್ರಶ್ನಿಸಿದರು.

### ಕಾಂಗ್ರೆಸ್‌ನಲ್ಲಿ ಎರಡು ಪ್ರತ್ಯೇಕ ಟೀಂಗಳಿವೆ



**ಹಾವೇರಿ :** ಡಿ.ಕೆ ಶಿವಕುಮಾರ್ ನಮ್ಮ ಭಿನ್ನಮತದ ಬಗ್ಗೆ ಮಾತನಾಡುತ್ತಿದ್ದರು. ಕೋಲಾರ ಘಟನೆ ಬಗ್ಗೆ ಈಗ ಏನು ಹೇಳುತ್ತಾರೆ ಎಂದು ಮಾಜಿ ಸಿಎಂ ಬಸವರಾಜ ಬೊಮ್ಮಾಯಿ ಪ್ರಶ್ನಿಸಿದ್ದಾರೆ.

ಹಾವೇರಿ ಜಿಲ್ಲೆ ಬ್ಯಾಡಗಿ ತಾಲೂಕಿನ ಅಸುಂಡಿಯಲ್ಲಿ ಮಾತನಾಡಿದ ಅವರು, ಅಲ್ಲಿ ಎರಡು ಪ್ರತ್ಯೇಕ ಟೀಂಗಳಿವೆ. ಕೋಲಾರದಷ್ಟೇ ಅಲ್ಲ, ಚಿಕ್ಕಬಳ್ಳಾಪುರ, ಬಾಗಲಕೋಟೆ ಜಿಲ್ಲಾ ಕಾಂಗ್ರೆಸ್‌ನಲ್ಲಿ ಭಿನ್ನಮತ ಇದೆ ಎಂದು ಬೊಮ್ಮಾಯಿ ಹೇಳಿದರು. ಎಚ್. ಕೆ ಪಾಟೀಲ್ ನಮ್ಮ ಹಿರಿಯರು. ಅವರು ಆ ವಯಸ್ಸಿನಲ್ಲಿ ಮಂತ್ರಿಯಾಗಿ ಕೆಲಸ ಮಾಡುತ್ತಿದ್ದಾರೆ. ಅಂತಹುದರಲ್ಲಿ ನಾನು ಸಂಸದನಾಗಿ ಆಯ್ಕೆ ಆಗಿ ಕೆಲಸ ಮಾಡುವುದರಲ್ಲಿ ತಪ್ಪೇನು ಅಲ್ಲವಲ್ಲ ಎಂದು ಬೊಮ್ಮಾಯಿ ಮರು ಪ್ರಶ್ನೆಯನ್ನು ಹಾಕಿದರು.

### ಸ್ವಯಂ ಪ್ರೇರಣೆಯಿಂದ ರಾಜಕೀಯಕ್ಕೆ: ಸಾಗರ್



**ಬೀದರ್:** ರಾಜಕೀಯಕ್ಕೆ ಬರಲು ನನ್ನ ಮೇಲೆ ಯಾವುದೇ ಒತ್ತಡ ಇರಲಿಲ್ಲ, ನಾನೇ ಸ್ವಯಂ ಪ್ರೇರಣೆಯಿಂದ ಬಂದಿದ್ದೇನೆ' ಎಂದು ಬೀದರ್ ಕಾಂಗ್ರೆಸ್ ಅಭ್ಯರ್ಥಿ ಸಾಗರ್ ಖಂಡ್ರೆ ತಿಳಿಸಿದರು. ಸುದ್ದಿಗಾರರೊಂದಿಗೆ ಮಾಡಿ ನಾಡಿದ ಅವರು, ಸಮಾಜ ನಮ್ಮ ಮನೆತನಕ್ಕೆ ಸಾಕಷ್ಟು ಕೊಟ್ಟಿದೆ. ವಾಪಸ್ ಕೊಡಲು ಸಮಾಜ ಸೇವೆಗೆ ಬಂದಿದ್ದೇನೆ ಎಂದು ತಿಳಿಸಿದರು.

# ತಂದೆಯಂತೆ, ಕೊಟ್ಟ ಮಾತು ಎಂದಿಗೂ ತಪ್ಪಲ್ಲ

**ನಮ್ಮ ತಂದೆಯವರು ಕೊಟ್ಟ ಮಾತು ಎಂದು ತಪ್ಪಿಲ್ಲ.ಅಲ್ಲದೇ ಅವರು ಸುರಪುರ ಮತ್ತು ಹುಣಸಗಿ ತಾಲೂಕಿನ ಸಮಗ್ರ ಅಭಿವೃದ್ಧಿಯ ಕನಸು ಕಂಡಿದ್ದರು, ಆದರೀಗ ಅದು ಅರ್ಧಕ್ಕೆ ನಿಂತಿದೆ.ಅದನ್ನು ನಾನು ಪೂರ್ಣಗೊಳಿಸಲು ಕ್ಷೇತ್ರದ ಜನ ಆಶೀರ್ವಾದ ಮಾಡುತ್ತಾರೆ ಎಂಬ ನಂಬಿಕೆಯಿದೆ. ಸರಕಾರದ ಗ್ಯಾರಂಟಿ, ತಂದೆಯವರ ಅಭಿವೃದ್ಧಿ ಕಾರ್ಯಗಳೇ ನನಗೆ ಶ್ರೀರಕ್ಷೆಯಾಗಿದ್ದು,ಇದನ್ನು ಮುಂದಿಟ್ಟುಕೊಂಡು ಮತ ಕೇಳುತ್ತೇವೆ.ಸುರಪುರ ವಿಧಾನಸಭೆ ಉಪಚುನಾವಣೆಯ ಕಾಂಗ್ರೆಸ್ ನಿಯೋಜಿತ ಅಭ್ಯರ್ಥಿ ರಾಜಾ ವೇಣು ಗೋಪಾಲ ನಾಯಕ ಅವರು ತಮ್ಮ ಮನದಾಳದ ಮಾತನ್ನು ವಿಶ್ವವಾಣಿ ವಿಶೇಷ ಸಂದರ್ಶನದಲ್ಲಿ ಹಂಚಿಕೊಂಡಿದ್ದಾರೆ.**

ವಿಶ್ವವಾಣಿ ಸಂದರ್ಶನ
ವೀರೇಶ್ ಎಸ್ ಕೆಂಭಾವಿ

**ಉಪಚುನಾವಣೆಯಲ್ಲಿ ನಿಲ್ಲುವುದಕ್ಕೆ ನೀವು ಸಿದ್ಧರಾಗಿದ್ದಿರೇ?**

ಕಳೆದ ನಲವತ್ತು ವರ್ಷಗಳಿಂದ ಕ್ಷೇತ್ರದ ಕಾರ್ಯಕರ್ತರು, ಅಭಿಮಾನಿಗಳು ನಮ್ಮ ಕುಟುಂಬದ ಜತೆಗಿದ್ದಾರೆ. ಅವರನ್ನು ನೋಡಿಕೊಳಬೇಕಾದ ಮಹತ್ತರ ಜವಾಬ್ದಾರಿ ನನ್ನ ಮೇಲಿದೆ ಹೀಗಾಗಿ ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆಜೀ ಅವರ ಆಶೀರ್ವಾದ, ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ. ಶಿವಕುಮಾರ್ ಅವರ ಮಾರ್ಗದರ್ಶನದಲ್ಲಿ ಜಿಲ್ಲಾ ಉಸ್ತುವಾರಿ ಸಚಿವ ಶರಣಬಸಪ್ಪ ದರ್ಶನಾಪುರ ಅವರ ನೇತೃತ್ವದಲ್ಲಿ ಉಪಚುನಾವಣೆ ಎದುರಿಸಲು ಸಂಪೂರ್ಣ ಸಜ್ಜಾಗಿದ್ದು, ನಾವು ಐದು ಜನ ಅಣ್ಣ ತಮ್ಮಂದಿರು ಒಟ್ಟಾಗಿ ಕ್ಷೇತ್ರದಾದ್ಯಂತ ಸಂಚರಿಸಿ ಮತದಾರರ ಮನೆ ಬಾಗಿಲಿಗೆ ಹೋಗಿ ಮತ ಕೇಳುತ್ತೇವೆ.

**ನಿಮಗೆ ಚುನಾವಣೆ ರಾಜಕೀಯಕ್ಕೆ ಬರುವ ಆಸಕ್ತಿ ಇತ್ತೇ?**

ನಾನು ಬೆಂಗಳೂರಿನಲ್ಲಿ ಎಂಜನಿಯರಿಂಗ್ ಓದುತ್ತಿದ್ದ ವೇಳೆಯಲ್ಲಿ ತಂದೆ ರಾಜಾ ವೆಂಕಟಪ್ಪ ನಾಯಕ ಅವರು ಲೋಕಸಭಾ ಚುನಾವಣೆಗೆ ಸ್ಪರ್ಧೆ ಮಾಡಿ ದ್ದರು. ಆ ವೇಳೆ ಪ್ರಚಾರ ಮಾಡಲು ನಾನು ಬಂದಾಗ ಜನತೆ ನನಗೆ ತೋರಿದ ಪ್ರೀತಿ, ವಿಶ್ವಾಸ ನನಗೂ ಕೂಡಾ ಜನಸೇವೆ ಮಾಡಬೇಕೆಂಬ ಆಸಕ್ತಿ ಬೆಳೆಯಲು ಕಾರಣವಾಯಿತು. ಆದ್ದರಿಂದ ಇದೀಗ ತಂದೆಯವರನ್ನು ಕಳೆದುಕೊಂಡು ನಾವು ಅಣ್ಣತಮ್ಮಂದಿರು ಅಷ್ಟೇ ಅಲ್ಲ ಕಾರ್ಯಕರ್ತರು ಕೂಡಾ ಅನಾಥರಾಗಿ ದ್ದಾರೆ.ಇವರೆಲ್ಲರ ಜವಾಬ್ದಾರಿ ನಾನು ಹೊರಬೇಕಾದ ಕಾರಣದಿಂದ ಚುನಾವಣೆಗೆ ಸ್ಪರ್ಧೆ ಮಾಡಬೇಕಾದ ಅನಿವಾರ್ಯತೆ ಎದುರಾಗಿದೆ.



**ರಾಜೂಗೌಡರು ನಿಮಗೆ ಕಠಿಣ ಸ್ಪರ್ಧೆ ನೀಡುವರಾ?**

ತಂದೆ ರಾಜಾ ವೆಂಕಟಪ್ಪ ನಾಯಕ ಅವರು ನಾಲ್ಕು ಬಾರಿ ಶಾಸಕರಾಗಿ ಹತ್ತ ಹಲವು ಅಭಿವೃದ್ಧಿ ಕಾರ್ಯಗಳು ಮಾಡಿದ್ದಾರೆ.ಅಲ್ಲದೇ ರಾಜ್ಯದಲ್ಲಿರುವ ಸಿದ್ದರಾಮಯ್ಯ ನೇತೃತ್ವದ ಸರಕಾರ ಕೂಡಾ ಉತ್ತಮ ಆಡಳಿತ ನೀಡುತ್ತಿದ್ದು, ಕಾಂಗ್ರೆಸ್ ಮೇಲೆ ಜನತೆಗೆ ನಂಬಿಕೆಯಿದೆ. ಹೀಗಾಗಿ ನನಗೆ ಯಾವುದೇ ದೊಡ್ಡ ಸವಾಲು ಎದುರಾಗುವುದಿಲ್ಲ.

> ಈ ಹಿಂದೆ ನಡೆದ ಸಾರ್ವತ್ರಿಕ ಚುನಾವಣೆ ಯಲ್ಲಿ ಪಂಚಗ್ಯಾರಂಟಿ ಕೊಡುತ್ತಿವೆ ಎಂದಾ ಗಲೇ ಕಾಂಗ್ರೆಸ್ ಪಕ್ಷಕ್ಕೆ ಅಭೂತಪೂರ್ವ ಬೆಂಬಲ ನೀಡಿದ್ದಾರೆ. ಈಗ ಕೊಟ್ಟ ಮಾತಿನಂತೆ ಗ್ಯಾರಂಟಿಗಳನ್ನು ಅನುಷ್ಠಾನ ಮಾಡಿದ್ದೇವೆ ಅದು ಜನರ ಮನಗೆದ್ದಿವೆ. ಹೀಗಾಗಿ ಉಪಚುನಾವಣೆ ಜೊತೆಗೆ ರಾಯಚೂರು ಲೋಕಸಭಾ ಕ್ಷೇತ್ರ ಸಹ ಕೈ ವಶಕ್ಕೆ ಪಡೆಯುತ್ತೇವೆ
> -ರಾಜಾ ವೇಣು ಗೋಪಾಲ ನಾಯಕ, ಕಾಂಗ್ರೆಸ್ ಅಭ್ಯರ್ಥಿ

**ತಂದೆ ಸ್ಥಾನಕ್ಕೆ ನಿಮಗೆ ಟಿಕೆಟ್ ಕೊಟ್ಟಿದ್ದಾರೆ ಹೇಗಿದೆ ಮತದಾರರ ಪ್ರತಿಕ್ರಿಯೆ?**

ಈಗಾಗಲೇ ಕ್ಷೇತ್ರ ಸಂಚಾರ ಮಾಡುತ್ತಿದ್ದು, ಹೋದ ಲೆಲ್ಲಾ ಮತದಾರರಿಂದ ಉತ್ತಮ ಪ್ರತಿಕ್ರಿಯೆ ವ್ಯಕ್ತವಾ ಗುತ್ತಿದೆ. ನಿಮ್ಮ ತಂದೆಯವರು ಹಲವು ಕೆಲಸಗಳನ್ನು ಮಾಡಿದ್ದಾರೆ. ಹಾಗಾಗಿ ನೀವು ಜಯಗಳಿಸುತ್ತೀರಿ ಎನ್ನುತ್ತಿದ್ದಾರೆ. ಅಲ್ಲದೇ ರಾಜ್ಯ ಸರಕಾರದ ಗ್ಯಾರಂಟಿ ಯೋಜನೆಗಳು ಜನತೆ ಮನಗೆದಿದ್ದು, ಅವುಗಳ ಕುರಿತು ಹಾಡಿಹೊಗಳುತ್ತಿದ್ದಾರೆ

**ತಂದೆಯವರು ರಾಜಕೀಯ ಬಗ್ಗೆ ಏನು ಹೇಳುತ್ತಿದ್ದರು?**

ಯಾವಾಗಲೂ ಜನತೆಯ ನೋವು ನಲಿವುಗಳಿಗೆ ಸ್ಪಂದಿಸಬೇಕು. ಒಂದು ಬಾರಿ ಮಾತು ಕೊಟ್ಟರೆ ಯಾವತ್ತು ಎತಂಹ ಕಷ್ಟ ಬಂದರೂ ಮಾತು ತಪ್ಪ ಬಾರದು. ಜನರಿಗೋಸ್ಕರ ಕೆಲಸ ಮಾಡಬೇಕು ಅವರ ಪರ ನಿಲ್ಲಬೇಕು ಎಂದು ಹೇಳುತ್ತಿದ್ದರು.ಇದೀಗ ಅವರು ಹಾಕಿ ಕೊಟ್ಟ ಮಾರ್ಗದಲ್ಲಿ ನಡೆಯುತ್ತಾ ಜನಸೇವೆ ಮುಂದುವರೆಸುವೆ.

**ಚುನಾವಣೆಯಲ್ಲಿ ಮೋದಿ ಅಲೆ ವಿರುದ್ಧ ಸೆಣಸುವುದು ಸುಲಭ ಎನಿಸುವುದೇ?**

ಮೋದಿ ಅಲೆಯಾಗಲಿ ಅಥವಾ ಇನ್ನಿತರ ಯಾವುದೇ ಅಲೆಗಳು ಇಲ್ಲಿ ಏನು ಮಾಡಲ್ಲ. ಕಳೆದ ವರ್ಷದಲ್ಲಿ ನಡೆದ ವಿಧಾನಸಭಾ ಸಾರ್ವತ್ರಿಕ ಚುನಾವಣೆಯಲ್ಲಿ ಮೋದಿ ಅವರು ಕ್ಷೇತ್ರಕ್ಕೆ ಬಂದು ಹೋಗಿದ್ದು ಆಗಿದೆ.ಅದು ಏನು ಪರಿಣಾಮ ಬೀರಲ್ಲ.ಜತೆಗೆ ಗ್ಯಾರಂಟಿ ಕೊಡುತ್ತೇವೆ ಎಂದಾಗಲೇ ನಮಗೆ ರಾಜ್ಯದಲ್ಲಿ ಕಾಂಗ್ರೆಸ್ ಪಕ್ಷಕ್ಕೆ 135 ಸ್ಥಾನ ಬಂದು ಅಧಿಕಾರ ನೀಡಿ ದ್ದಾರೆ. ಇಂದು ಕೊಟ್ಟ ಮಾತಿನಂತೆ ಎಲ್ಲ ಗ್ಯಾರಂಟಿಗಳನ್ನು ಅನುಷ್ಠಾನ ಮಾಡಿದ್ದು, ಈಗ ಕಳೆದ ಬಾರಿಗಿಂತ ಹೆಚ್ಚಿನ ಒಲವು ಕಾಂಗ್ರೆಸ್ ಪರವಿದೆ. ಹೀಗಾಗಿ ರಾಯಚೂರು ಲೋಕಸಭಾ ಅಭ್ಯರ್ಥಿ ರಾಜಾ ಕುಮಾರ ನಾಯಕ ಮತ್ತು ನನ್ನ ಗೆಲುವಿಗೆ ಯಾವುದು ತಡೆ ಕೂಡಾ ಆಗಲ್ಲ.

**ರಾಯಚೂರು ಲೋಕಸಭಾ ಚುನಾವಣೆಗೆ ತಂದೆಯವರ ಹೆಸರು ಕೇಳಿಬಂದಿತ್ತು.ಈ ಕುರಿತು ನಿಮ್ಮೊಂದಿಗೆ ಏನಾದಾರೂ ಚರ್ಚಿಸಿದ್ದೀರಾ?**

ಎಐಸಿಸಿ ಅಧ್ಯಕ್ಷರಾದ ಮಲ್ಲಿಕಾರ್ಜುನ ಖರ್ಗೆ ಅವರು ಈ ವಿಷಯ ಪ್ರಸ್ತಾಪಿಸಿದಾಗೇ ತಂದೆಯವರು ಹೇಳಿದ್ದರು. ಖರ್ಗೆಜೀ ಅವರು ಒತ್ತಡ ಹಾಕಿದರೆ ಸ್ಪರ್ಧೆ ಮಾಡುವುದು ಅನಿವಾರ್ಯವಾಗುತ್ತದೆ ಎಂದು ಹೇಳಿಕೊಂಡಿದ್ದರು. ಏಕೆಂದರೆ ಅವರ ಮಾತು ಎಂದಿಗೂ ತಂದೆಯವರು ಮೀರುತ್ತಿರಲಿಲ್ಲ.

**ಮತದಾರರಿಗೆ ಏನು ಹೇಳಲು ಬಯಸುವಿರಿ?**

ತಂದೆಯವರು ಕೊಟ್ಟ ಮಾತು ಎಂದಿಗೂ ತಪ್ಪಿಲ್ಲ.ನುಡಿದಂತೆ ನಡೆದ್ದಿದ್ದಾರೆ.ಇದೀಗ ಅವರ ಹಾದಿಯಲ್ಲಿ ನಾನು ಸಾಗಬೇಕಾಗಿದೆ. ಹುಣಸಗಿ ಮತ್ತ ಸುರಪುರ ತಾಲೂಕಿನ ಸಮಗ್ರ ಅಭಿವೃದ್ಧಿ ಕನಸು ಅವರಾದಾಗಿತ್ತು.ಆದರೆ,ಅದಕ್ಕೆ ವಿಧಿ ಅವಕಾಶ ನೀಡಲಿಲ್ಲ.ಹೀಗಾಗಿ ಅವರ ಕನಸು ನಾನು ನನಸು ಮಾಡಬೇಕಾಗಿದ್ದು, ಕ್ಷೇತ್ರದ ಮತದಾರರು ನನಗೆ ಅವಕಾಶ ಮಾಡಿಕೊಡಬೇಕಾಗಿದೆ

## ಹೊರ ಜಿಲ್ಲೆಯವ ಎನ್ನುವ ಕಾಂಗ್ರೆಸ್‌ಗೆ ನೈತಿಕತೆಯಿಲ್ಲ

**ಬೆಳಗಾವಿ:** ದೆಹಲಿಯ ಅಜಯ್ ಮಾಕನ್ ಅವರನ್ನು ಕಾಂಗ್ರೆಸ್‌ನವರು ರಾಜ್ಯಸಭಾ ಸದಸ್ಯರಾಗಿ ಆಯ್ಕೆ ಮಾಡಿದ್ದಾರೆ. ರಾಹುಲ್ ಗಾಂಧಿ ಕೇರಳದ ವಯಾನಾಡಿನಿಂದ ಲೋಕಸಭೆಗೆ ಸ್ಪರ್ಧಿಸಿದ್ದಾರೆ. ಅವರು ಯಾರೂ ಕ್ಷೇತ್ರದ ಹೊರಗಿನವರಲ್ಲವೇ? ನನ್ನನ್ನು ಹೊರಗಿನವನು ಎಂದು ಕರೆಯುವ ನೈತಿಕ ಹಕ್ಕು ಕಾಂಗ್ರೆಸ್ಸಿಗರಿಗಿಲ್ಲ ಎಂದು ಬೆಳಗಾವಿ ಲೋಕಸಭಾ ಕ್ಷೇತ್ರದ ಬಿಜೆಪಿ ಅಭ್ಯರ್ಥಿ ಜಗದೀಶ ಶೆಟ್ಟರ್ ತಿರುಗೇಟು ನೀಡಿದರು.

ಸುದ್ದಿಗಾರರೊಂದಿಗೆ ಮಾತನಾಡಿ, 30 ವರ್ಷಗಳಿಂದ ಬೆಳಗಾವಿ ಜಿಲ್ಲೆಯೊಂದಿಗೆ ಹೊಂದಿದ ಒಡನಾಟ ಮತ್ತು ಅನುಭವ ಪರಿಗಣಿಸಿ, ಪಕ್ಷದ ಹೈಕಮಾಂಡ್ ಅಭ್ಯರ್ಥಿಯಾಗಿ ನನ್ನನ್ನು ಘೋಷಿಸಿದೆ. ಜನಸಂಘದ ದಿನಗಳಿಂದಲೂ ನನ್ನ ಕುಟುಂಬ ಬಿಜೆಪಿಯೊಂದಿಗೆ ಸಂಬಂಧ ಹೊಂದಿದೆ. ನಾನು ಬಿಜೆಪಿ ತೊರೆದು ಅಲ್ಪಾವಧಿಗೆ ಕಾಂಗ್ರೆಸ್ ಸೇರಿದ್ದೆ. ಆದರೆ, ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಗೃಹ ಸಚಿವ ಅಮಿತ್ ಶಾ ಮತ್ತು ಬಿಜೆಪಿ ರಾಷ್ಟ್ರೀಯ ಘಟಕದ ಅಧ್ಯಕ್ಷ ಜೆ.ಪಿ.ನಡ್ಡಾ ಅವರ ಆಹ್ವಾನದ ಮೇರೆಗೆ ಹಿಂತಿರುಗಿದ್ದೇನೆ. ಬೆಳಗಾವಿಯಲ್ಲಿನ ಸಮಸ್ಯೆಗಳಿಗೆ ನಾಯಕರು ತೆರೆ ಎಳೆದಿದ್ದಾರೆ. ಜಿಲ್ಲೆಯ ಎಲ್ಲ ಮುಖಂಡರು ಹಾಗೂ ಕಾರ್ಯಕರ್ತರ ಸಹಕಾರದೊಂದಿಗೆ ಲೋಕಸಭೆ ಚುನಾವಣೆ ಗೆಲುವಿಗೆ ಸಿದ್ಧತೆ ನಡೆಸಿದ್ದೇನೆ ಎಂದರು.



> ಕಾಂಗ್ರೆಸ್ ಸರಕಾರ ಭ್ರಷ್ಟಾಚಾರದಲ್ಲಿ ಮುಳುಗಿದೆ. ಗ್ಯಾರಂಟಿ ಯೋಜನೆಗಳಿಂದಾಗಿ ಆಡಳಿತ ಯಂತ್ರ ಸ್ಥಗಿತಗೊಂಡಿದೆ. ಸರಕಾರದಿಂದ ಅಭಿವೃದ್ಧಿ ಕೆಲಸಗಳಾಗುತ್ತಿಲ್ಲ ಎಂದು ಸ್ವತಃ ಕಾಂಗ್ರೆಸ್ ಶಾಸಕರೇ ಹೇಳುತ್ತಿದ್ದಾರೆ. ಕಾಂಗ್ರೆಸ್‌ಗೆ ಈಗ ಸೋಲಿನ ಭಯ ಆರಂಭವಾಗಿದ್ದು, ಸರಕಾರ ಪತನವಾಗಲಿದೆ.
> -ಜಗದೀಶ್ ಶೆಟ್ಟರ್, ಮಾಜಿ ಸಿಎಂ

## ಬೆಳಗಾವಿಗೆ ಜಗದೀಶ ಶೆಟ್ಟರ್ ಕೊಡುಗೆ ಏನು?

**ಬೆಳಗಾವಿ:** ಕೋವಿಡ್ ಸಂದರ್ಭದಲ್ಲಿ ಬೆಳಗಾವಿ ಜಿಲ್ಲೆಗೆ ಅಲೋಟ್ ಆಗಿದ್ದ ಆಕ್ಸಿಜನ್‌ನ್ನು ಹುಬ್ಬಳ್ಳಿ - ಧಾರವಾಡಕ್ಕೆ ತೆಗೆದುಕೊಂಡು ಹೋಗಿ ಇಲ್ಲಿಯ ಜನರಿಗೆ ಅನ್ಯಾಯ ಮಾಡಿರುವ ಜಗದೀಶ್ ಶೆಟ್ಟರ್ ಕೊಡುಗೆ ಏನಿದೆ ಬೆಳಗಾವಿ ಜಿಲ್ಲೆಗೆ?. ಬೆಳಗಾವಿ ಜಿಲ್ಲೆಯ ಜನರನ್ನು ಬಕ್ರಾ ಮಾಡಲು ಬಂದಿದ್ದೀರಾ? ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳ್ಕರ್ ಖಾರವಾಗಿ ಪ್ರಶ್ನಿಸಿದ್ದಾರೆ.

ಸುದ್ದಿಗಾರರೊಂದಿಗೆ ಮಾತನಾಡಿ, ಶೆಟ್ಟರ್ ಏನ್ ಮಾಡಿದ್ದಾರೆ ಬೆಳಗಾವಿಗೆ? ಬೆಳಗಾವಿ ದೊಡ್ಡ ಜಿಲ್ಲೆ, ಜನಸಂಖ್ಯೆ ಹೆಚ್ಚಿದೆ. ಕರೋನಾ ಸಂದರ್ಭದಲ್ಲಿ ಜಿಲ್ಲೆಗೆ ಆಕ್ಸಿಜನ್ ಅಲೋಟ್ ಮಾಡಿದ್ದನ್ನು ಹುಬ್ಬಳ್ಳಿ -ಧಾರವಾಡಕ್ಕೆ ತೆಗೆದುಕೊಂಡು ಹೋಗಿದ್ದಾರೆ. ಇದೇ ಕರ್ಮ ಭೂಮಿಯಾ? ಜಿಲ್ಲಾ ಉಸ್ತುವಾರಿ ಸಚಿವರಿದ್ದರಲ್ಲ, ಕರ್ಮ ಭೂಮಿ ಎನ್ನಲು ಏನ್ ಮಾಡಿದ್ದಾರೆ ಬೆಳಗಾವಿಗೆ? ಎಂದು ಪ್ರಶ್ನಿಸಿದರು.

6 ಬಾರಿ ಹುಬ್ಬಳ್ಳಿ ಜನರು ಅವರನ್ನು ಆಯ್ಕೆ ಮಾಡಿ ಕಳುಹಿಸಿದ್ದರು. ವಿರೋಧ ಪಕ್ಷದ ನಾಯಕರಾದರು, ಮಂತ್ರಿಯಾದರು, ಮುಖ್ಯಮಂತ್ರಿಯಾದರು, ಬಿಜೆಪಿ ಅಧ್ಯಕ್ಷರಾದರು. ಎಲ್ಲವನ್ನೂ ಅನುಭವಿಸಿದ್ದಂತವರನ್ನು ಹುಬ್ಬಳ್ಳಿ- ಧಾರವಾಡ ಜನರು ಹೊರಗೆ ಹಾಕಿದ್ದಾರೆ ಹೆಬ್ಬಾಳ್ಕರ್ ಕಿಡಿಕಾರಿದರು.




> ಗೋ ಬ್ಯಾಕ್ ಶೆಟ್ಟರ್ ಎನ್ನುವುದು ಅವರ ಪಕ್ಷದ ಕಾರ್ಯಕರ್ತರೇ ಮಾಡುತ್ತಿರುವ ಅಭಿಯಾನ, ಅವರ ಪಕ್ಷದ ಕಾರ್ಯಕರ್ತರ ಸ್ವಾಭಿಮಾನಕ್ಕೂ ಧಕ್ಕೆಯಾಗಿದೆ. ಮೋದಿಯವರು ಎಲ್ಲೋ ಹೋಗಿ ಚುನಾವಣೆಗೆ ನಿಂತಿದ್ದಾರೆ ಎಂದು ತಮ್ಮ ಬೆಳಗಾವಿ ಸ್ಪರ್ಧೆಯನ್ನು ಸಮರ್ಥಿಸಿಕೊಳ್ಳುತ್ತಿದ್ದಾರೆ.
> -ಲಕ್ಷ್ಮೀ ಹೆಬ್ಬಾಳ್ಕರ್, ಸಚಿವೆ

## ಗೆದ್ದು ಪ್ರಧಾನಿ ಮೋದಿ ಬಳಿ ಹೋಗಿಯೇ ಹೋಗುತ್ತೇನೆ

**ಶಿವಮೊಗ್ಗ:** ನಾನು ಯಾವುದೇ ಕಾರಣಕ್ಕೂ ಸ್ಪರ್ಧೆಯಿಂದ ಹಿಂದೆ ಸರಿಯಲ್ಲ. ನಾನು ಗೆದ್ದ ನಂತರ ಪ್ರಧಾನಿ ಮೋದಿ ಬಳಿ ಹೋಗಿಯೇ ಹೋಗುತ್ತೇನೆ ಎಂದು ಬಂಡಾಯ ಅಭ್ಯರ್ಥಿ ಕೆ.ಎಸ್. ಈಶ್ವರಪ್ಪ ಹೇಳಿದರು.

ನಗರದಲ್ಲಿ ಈಶ್ವರಪ್ಪ ನಿವಾಸದಲ್ಲಿ ನೂತನ ಚುನಾವಣಾ ಕಚೇರಿ ಉದ್ಘಾಟನೆ ಮಾಡಿ ಬಳಿಕ ಮಾತನಾಡಿದ ಅವರು, ಲೋಕಸಭಾ ಕ್ಷೇತ್ರದಲ್ಲಿ ಸ್ಪರ್ಧೆ ಮಾಡಲು ತೀರ್ಮಾನ ಮಾಡಲಾಗಿದೆ. ಹಾಗಾಗಿ ನನ್ನ ನಿವಾಸದಲ್ಲೇ ಕಚೇರಿ ಉದ್ಘಾಟನೆ ಮಾಡಿದ್ದೇವೆ. ನನ್ನ ಮಗನನ್ನು ಎಂಪಿ ಮಾಡುತ್ತೇನೆ ಎಂದು ಸುಳ್ಳು ಹೇಳಿದರು. ಮಾಜಿ ಸಿಎಂ ಬಿ.ಎಸ್.ಯಡಿಯೂರಪ್ಪ ಸುಳ್ಳಿನ ಸರದಾರ ಎಂದು ವಾಗ್ದಾಳಿ ಮಾಡಿದ್ದಾರೆ. ರಾಜ್ಯದಲ್ಲಿ ಕಾರ್ಯಕರ್ತರ ನೋವನ್ನು ಹೋಗಲಾಡಿಸಬೇಕು. ಪಕ್ಷದಿಂದ ತೆಗೆದು ಹಾಕಿದ್ರೆ ಗೆದ್ದ ನಂತರ ಮತ್ತೆ ಬಿಜೆಪಿ ಸೇರುತ್ತೇನೆ. ತೆಗೆದು ಹಾಕಲಿಲ್ಲ ಅಂದರೆ ಪಕ್ಷದಲ್ಲೇ ಇರುತ್ತೇನೆ. ರಾಘವೇಂದ್ರ ಸೋಲಿನ ನಂತರ ಬಿಎಸ್ ವಿಜಯೇಂದ್ರ ರಾಜ್ಯಾಧ್ಯಕ್ಷ ಕಳೆದುಕೊಳುತ್ತಾನೆ ಎಂದು ಕಿಡಿಕಾರಿದ್ದಾರೆ. ಕ್ಷೇತ್ರದಲ್ಲಿ ಹಾಲಿ ಸಂಸದರ ಬಗ್ಗೆ ಆಕ್ರೋಶವಿದೆ. ಅದರೊಂದಿಗೆ ನನಗಾದ ಅನ್ಯಾಯವನ್ನು ಗಮನಿಸಿ, ಅದನ್ನು ಸರಿಪಡಿಸಲು ವ್ಯಾಪಕ ಬೆಂಬಲ ವ್ಯಕ್ತವಾಗಿದೆ. ಜನರ ಪ್ರೀತಿ ಹಾಗೂ ನಂಬಿಕೆ ಉಳಿಸಿಕೊಂಡು ಅಭಿವೃದ್ಧಿಗಾಗಿ ದುಡಿಯುತ್ತೇನೆ ಎಂದರು.



> ರಾಜ್ಯದಲ್ಲಿ ನನಗೆ ಎಷ್ಟು ಸೀಟು ಬಿಜೆಪಿ ತೆಗೆದುಕೊಳ್ಳುತ್ತಾರೆ ಎನ್ನುವ ಭಯ ಶುರುವಾಗಿದೆ. ರಾಜ್ಯ ನಾಯಕರು ವರಿಷ್ಠರಿಗೆ ಏನೂ ಹೇಳುತ್ತಾರೆ ಗೊತ್ತಿಲ್ಲ. ನಾನು ಸೇರಿ ಬಿಜೆಪಿಯಿಂದ 28 ಸ್ಥಾನ ಗೆಲ್ಲುವ ವಿಶ್ವಾಸ ಇದೆ. ಏ. 12 ರಂದು ನಾನು ನಾಮಪತ್ರ ಸಲ್ಲಿಕೆ ಮಾಡುತ್ತೇನೆ.
> -ಕೆ.ಎಸ್.ಈಶ್ವರಪ್ಪ, ಮಾಜಿ ಸಚಿವ

5.44 ಕೋಟಿ ಚರಾಸ್ತಿ, 35.40 ಕೋಟಿ ಮೊತ್ತದ ಸ್ಥಿರಾಸ್ತಿ

## 40.84 ಕೋಟಿ ಒಡೆಯ ಪ್ರಜ್ವಲ್

**ಹಾಸನ:** ಹಾಸನ ಲೋಕಸಭಾ ಕ್ಷೇತ್ರದ ಜೆಡಿಎಸ್ ಅಭ್ಯರ್ಥಿಯಾಗಿ ಪ್ರಜ್ವಲ್ ರೇವಣ್ಣ ಗುರುವಾರ ನಾಮಪತ್ರ ಸಲ್ಲಿಸಿದರು. ಈ ವೇಳೆ ಅವರು 40.84 ಕೋಟಿ ರು. ಆಸ್ತಿ ಘೋಷಿಸಿದ್ದಾರೆ. ಇದರಲ್ಲಿ 5.44 ಕೋಟಿ ರು. ಮೊತ್ತದ ಚರಾಸ್ತಿ ಹಾಗೂ 35.40 ಕೋಟಿ ರು. ಮೊತ್ತದ ಸ್ಥಿರಾಸ್ತಿ ಸೇರಿದೆ.

ಪ್ರಜ್ವಲ್ ರೇವಣ್ಣ 2018-19ರಲ್ಲಿ ತಮ್ಮ ಸಾಮಾನ್ಯ ಆದಾಯ 6.48 ಲಕ್ಷ ರು. ಹಾಗೂ ಕೃಷಿ ಆದಾಯ 26.98 ಲಕ್ಷ ರು. ಎಂದು ಘೋಷಿಸಿದ್ದಾರೆ. 2022-23ರಲ್ಲಿ 36.14 ಲಕ್ಷ ರು. ಸಾಮಾನ್ಯ ಆದಾಯ ಹಾಗೂ 42.41 ಲಕ್ಷ ರು. ಕೃಷಿ ಆದಾಯ ಗಳಿಸಿರುವುದಾಗಿ ಅವರು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.

ಮೆಕ್ಯಾನಿಕಲ್ ಎಂಜಿನಿಯರಿಂಗ್ ಪದವೀಧರರಾಗಿರುವ ಪ್ರಜ್ವಲ್ ರೇವಣ್ಣ ಮೇಲೆ ಯಾವುದೇ ಪ್ರಕರಣಗಳಿಲ್ಲ. ತಮ್ಮ ಕೈಯಲ್ಲಿ 9.29 ಲಕ್ಷ ರು. ಹಣವಿದ್ದು, ವಿವಿಧ ಬ್ಯಾಂಕ್ ಖಾತೆಗಳಲ್ಲಿ ಠೇವಣಿ, ಹೂಡಿಕೆ, ನೀಡಿದ ಸಾಲ, ವಾಹನಗಳ ಮೌಲ್ಯ ಸೇರಿ ಒಟ್ಟು 5.44 ಕೋಟಿ ರು. ಮೊತ್ತದ ಚರಾಸ್ತಿ ಇದೆ ಎಂದು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.




ಹಾಸನ ಜೆಡಿಎಸ್ ಅಭ್ಯರ್ಥಿಯಾಗಿ ಗುರುವಾರ ನಾಮಪತ್ರ ಸಲ್ಲಿಸಿದ ಪ್ರಜ್ವಲ್ ರೇವಣ್ಣ.

### 31 ದನ, 4 ಹೋರಿ, 1 ಪಿಸ್ತೂಲ್, 1 ಗನ್

**ಅಜ್ಜಿ ಚನ್ನಮ್ಮ ಅವರಿಗೆ ಪ್ರಜ್ವಲ್ ರೇವಣ್ಣ 23 ಲಕ್ಷ ರು. ಸಾಲ ನೀಡಿದ್ದು, ತಮ್ಮ ಸೂರಜ್ ರೇವಣ್ಣನಿಗೆ 1.56 ಕೋಟಿ ರು. ಸಾಲ ನೀಡಿದ್ದಾರೆ. 5 ಲಕ್ಷ ರು. ಮೌಲ್ಯದ ಟ್ರಾಕ್ಟರ್, 67.26 ಲಕ್ಷ ರು. ಮೌಲ್ಯ 1.1 ಕೆಜಿ ಚಿನ್ನ, 17.48 ಲಕ್ಷ ರು. ಮೌಲ್ಯದ 23 ಕೆಜಿ ಬೆಳ್ಳಿ, 1.04 ಲಕ್ಷ ರು. ಮೌಲ್ಯದ ಪಿಸ್ತೂಲ್, 2.68 ಲಕ್ಷ ರು. ಮೌಲ್ಯದ ರೈಫಲ್ ಕೂಡ ಪ್ರಜ್ವಲ್ ಬಳಿ ಇದೆ. ಹಾಸನದ ಹಾಲಿ ಸಂಸದರು 23.25 ಲಕ್ಷ ರು. ಮೌಲ್ಯದ 31 ದನ, 2.40 ಲಕ್ಷ ರು. ಮೌಲ್ಯದ 4 ಹೋರಿಗಳನ್ನೂ ಹೊಂದಿದ್ದಾರೆ. 20 ಕೃಷಿ ಭೂಮಿ, 3 ಕೃಷಿಯೇತರ ಜಮೀನು, 2 ವಾಣಿಜ್ಯ ಸಂಕೀರ್ಣ ಸೇರಿ 35.40 ಕೋಟಿ ರು. ಮೊತ್ತದ ಸ್ಥಿರಾಸ್ತಿ ಹೊಂದಿದ್ದಾರೆ. 40.84 ಕೋಟಿ ರು. ಆಸ್ತಿ ಘೋಷಿಸಿಕೊಂಡಿರುವ ಪ್ರಜ್ವಲ್ ರೇವಣ್ಣ ಕೃಷಿ ಮತ್ತು ಉದ್ಯಮ ತಮ್ಮ ಆದಾಯದ ಮೂಲ ಎಂದು ಅಫಿಡವಿಟ್‌ನಲ್ಲಿ ತಿಳಿಸಿದ್ದಾರೆ.**

ರಕ್ಷಾರಾಮಯ್ಯಗೆ ಕಾಂಗ್ರೆಸ್ ಟಿಕೆಟ್ ನೀಡದಂತೆ ವಿರೋಧ | ಮೊಯ್ಲಿ, ಶಿವಶಂಕರ ರೆಡ್ಡಿಗೆ ನೀಡಲು ಒತ್ತಾಯ

## ಚಿಕ್ಕಬಳ್ಳಾಪುರ ಕಾಂಗ್ರೆಸ್‌ನಲ್ಲೂ ಭುಗಿಲೆದ್ದ ಭಿನ್ನಮತ

**ಮುನಿರಾಜು ಎಂ ಅರಿಕೆರೆ** ಚಿಕ್ಕಬಳ್ಳಾಪುರ





ಕೋಲಾರ ಲೋಕಸಭಾ ಕ್ಷೇತ್ರದ ಕಾಂಗ್ರೆಸ್ ಟಿಕೆಟ್ ಕಗ್ಗಂಟಾಗಿರುವ ಬೆನ್ನಲ್ಲೆ ಚಿಕ್ಕಬಳ್ಳಾಪುರ ಲೋಕಸಭಾ ಕ್ಷೇತ್ರದ ಟಿಕೆಟ್‌ಗೂ ಜಟಾಪಟಿ ಏರ್ಪಟ್ಟಿದೆ. ಕೋಲಾರದಲ್ಲಿ ಕೆ.ಎಚ್.ಮುನಿಯಪ್ಪ ಅವರಿಗೆ ಟಿಕೆಟ್ ನೀಡದಂತೆ ಸಾಮೂಹಿಕ ರಾಜೀನಾಮೆ ಬೆದರಿಕೆ ಒಡ್ಡಿದಂತೆ ಇಲ್ಲೂ ಕೂಡ ನಡೆಯುವ ಸೂಚನೆಗಳಿವೆ ಎನ್ನಲಾಗಿದೆ. ಚಿಕ್ಕಬಳ್ಳಾಪುರದಲ್ಲಿ ಟಿಕೆಟ್ ನೀಡುವುದಾದರೆ ಮಾಜಿ ಮುಖ್ಯಮಂತ್ರಿ ವೀರಪ್ಪಮೊಲಿ ಅವರಿಗೆ ನೀಡಬೇಕು.ತಪ್ಪಿದಲ್ಲಿ ಎನ್. ಎಚ್. ಶಿವಶಂಕರ್‌ರೆಡ್ಡಿ ಅವರಿಗೆ ನೀಡಬೇಕು. ರಕ್ಷಾರಾಮಯ್ಯಗೆ ನೀಡಿದರೆ ನಾವು ಸಾಮೂಹಿಕ ರಾಜೀನಾಮೆ ನೀಡಲು ಸಿದ್ಧ ಎಂದು ಕೆಲ ಹಾಲಿ ಮಾಜಿ ಶಾಸಕರು ವಿಧಾನ ಪರಿಷತ್ ಸದಸ್ಯರು ಪಕ್ಷದ ಅಧ್ಯಕ್ಷರು ಮತ್ತು ಮುಖ್ಯಮಂತ್ರಿಗಳ ಗಮನಕ್ಕೆ ತಂದಿದ್ದಾರೆ ಎನ್ನುವುದು ಬಲ್ಲ ಮೂಲಗಳ ಸಂಗತಿ.

ರಾಜೀನಾಮೆಗೆ ಸಿದ್ಧವಾಗಿರುವ ಪಟ್ಟಿಯಲ್ಲಿ ಶಾಸಕ ಸುಬ್ಬಾರೆಡ್ಡಿ, ಶರತ್ ಬಚ್ಚೇಗೌಡ, ಪುಟ್ಟಸ್ವಾಮಿಗೌಡ, ಎಂಎಲ್ಸಿ ರವಿ, ಶ್ರೀನಿವಾಸಯ್ಯ, ವೆಂಕಟರಮಣಯ್ಯ, ಕೆ.ಎನ್.ಕೇಶವ ರೆಡ್ಡಿ, ಸಿ.ಆರ್.ಗೌಡ ಇದ್ದಾರೆ ಎನ್ನಲಾಗಿದೆ. ಚಿಕ್ಕಬಳ್ಳಾಪುರ ಮತ್ತು ಕೋಲಾರ ಲೋಕಸಭಾ ಕ್ಷೇತ್ರದ ಟಿಕೆಟ್ ಹೈಕಮಾಂಡ್‌ಗೆ ಕಗ್ಗಂಟಾಗಿದ್ದು ಇನ್ನಿಲ್ಲದ ಸಂಕಷ್ಟವನ್ನು ತಂದೊಡ್ಡುತ್ತಿವೆ. ನಾಮಪತ್ರ ಸಲ್ಲಿಸಲು ದಿನಗಣನೆ ಆರಂಭವಾಗಿರುವ ಹೊತ್ತಿನಲ್ಲಿ ಇದನ್ನು ಹೇಗೆ ಬಗೆಹರಿಸಲಿದೆ ಎನ್ನುವುದನ್ನು ಕಾದು ನೋಡಬೇಕಿದೆ.

### ಬೆಂಬಲಿಗರ ಜತೆ ಸಭೆ

**ಕಾಂಗ್ರೆಸ್ ಹೈಕಮಾಂಡ್ ಹಿಂದುಳಿದ ವರ್ಗದ ಯುವ ನಾಯಕರಾಗಿರುವ ರಕ್ಷಾರಾಮಯ್ಯಗೆ ಟಿಕೆಟ್ ನೀಡಲು ಮುಂದಾಗಿದೆ ಎನ್ನುವ ಸುದ್ದಿ ಪಡೆದ ವೀರಪ್ಪಮೊಯ್ಲಿ ಮತ್ತು ಶಿವಶಂಕರರೆಡ್ಡಿ ಅವರು ತಮ್ಮ ತಮ್ಮ ಬೆಂಬಲಿಗರು, ಶಾಸಕರು, ಪರಿಷತ್ ಸದಸ್ಯರು, ಅಭಿವೃದ್ಧಿ ನಿಗಮದ ಅಧ್ಯಕ್ಷರ ಕೈಯಲ್ಲಿ ರಾಜೀನಾಮೆ ಕೊಡಿಸುವ ಹೊಸ ಆಟದ ಬೆದರಿಕೆ ಹಾಕುತ್ತಿದ್ದಾರೆ. ಇದಕ್ಕೆ ಪುಷ್ಟಿ ನೀಡುವಂತೆ ಬೆಂಗಳೂರಿನ ಹೋಟೆಲ್ ಏಟ್ರಿಯಾದಲ್ಲಿ ಗುರುವಾರ ಇಬ್ಬರೂ ನಾಯಕರು ಬೆಂಬಲಿಗರು ಕೂಡಿ ಸಭೆ ನಡೆಸುವ ಮೂಲಕ ತಮ್ಮ ನಿರ್ಧಾರವನ್ನು ಹೈಕಮಾಂಡ್‌ಗೆ ಮುಟ್ಟಿಸುವಲ್ಲಿ ಸಫಲರಾಗಿದ್ದಾರೆ. ಇದಕ್ಕೆ ಪ್ರತಿಯಾಗಿ ರಕ್ಷಾರಾಮಯ್ಯ ಕೂಡ ಖಾಸಗಿ ಹೋಟೆಲ್‌ನಲ್ಲಿ ತಮ್ಮ ಬೆಂಬಲಿಗರ ಸಭೆ ನಡೆಸಿ ತಮ್ಮ ಪರವಾಗಿ ಬ್ಯಾಟ್ ಬೀಸುವಂತೆ ಹೈಕಮಾಂಡ್ ಬಳಿ ತಮ್ಮ ಹೆಸರನ್ನು ಸೂಚಿಸುವಂತೆ ಮನವಿ ಮಾಡಿದ್ದಾರೆ ಎನ್ನುವ ಸುದ್ದಿಗೂ ಕೂಡ ಇನ್ನಿಲ್ಲದ ಬಲಬಂದಿದೆ.**

### ನನಗೆ ಟಿಕೆಟ್ ನೀಡಬೇಕು

**ಈ ನಡುವೆ ಟಿಕೆಟ್ ವಿಚಾರದಲ್ಲಿ ಮಾಧ್ಯಮದೊಂದಿಗೆ ಮಾತನಾಡಿರುವ ಮಾಜಿ ಶಾಸಕ ಎನ್.ಎಚ್.ಶಿವಶಂಕರ ರೆಡ್ಡಿ ರಕ್ಷಾರಾಮಯ್ಯ ಆಗಲಿ, ವೀರಪ್ಪ ಮೊಯ್ಲಿ ಇಬ್ಬರೂ ಹೊರಗಿನವರು. ವೀರಪ್ಪ ಮೊಯ್ಲಿ ಅವರನ್ನು ಇಲ್ಲಿಗೆ ಕರೆದುಕೊಂಡು ಬಂದಿದ್ದು ನಾವೇ.ನಾನು ಪಕ್ಷದಲ್ಲಿ ಹಿರಿಯನಿದ್ದು ನನಗೆ ಟಿಕೆಟ್ ನೀಡಬೇಕು. ಬಿಜೆಪಿ ಒಕ್ಕಲಿಗರಿಗೆ ಟಿಕೆಟ್ ನೀಡಿರುವುದರಿಂದ ನಮ್ಮ ಪಕ್ಷ ನನಗೆ ಟಿಕೆಟ್ ನೀಡಿದರೆ ಒಕ್ಕಲಿಗರ ಮತಗಳು ಸೆಳೆದು ಗೆಲುವು ಸಾಧಿಸಬಹುದು. ನನಗೆ ಟಿಕೆಟ್ ಕೈತಪ್ಪಿದರೆ ಪಕ್ಷದ ಪ್ರಾಥಮಿಕ ಸದಸ್ಯತ್ವಕ್ಕೆ ರಾಜೀನಾಮೆ ನೀಡುತ್ತೇನೆ ಎನ್ನುತ್ತಾರೆ.**



> ಸಿಎಂ ಸಿದ್ದರಾಮಯ್ಯ ದೇಶದಲ್ಲಿ ಅತ್ಯುತ್ತಮ ಆಡಳಿತ ನಡೆಸಿದ್ದಾರೆ. ಗ್ಯಾರಂಟಿ ಯೋಜನೆಗಳನ್ನು ನೀಡುವ ಮೂಲಕ ಕಲ್ಯಾಣದ ನಾಡನ್ನು ನಿರ್ಮಿಸಿದ್ದಾರೆ. ಬಿಜೆಪಿ ಸುಳ್ಳು ಆಶ್ವಾಸನೆಗಳನ್ನು ನೀಡುವ ಮುಖಾಂತರ ಜನರನ್ನು ದಾರಿ ತಪ್ಪಿಸುತ್ತಿದೆ. ಲೋಕಸಭೆಯಲ್ಲಿ ಜನರು ಕಾಂಗ್ರೆಸ್‌ಗೆ ಅಧಿಕಾರಕ್ಕೆ ತರುತ್ತಾರೆ. ಅಧಿಕಾರಕ್ಕೆ ಬಂದರೆ ಕಾಂಗ್ರೆಸ್ ಹೊಸ ಗ್ಯಾರಂಟಿಗಳೊಂದಿಗೆ ನಾನಾ ಯೋಜನೆಗಳನ್ನು ಜಾರಿಗೊಳಿಸಲಿದೆ.
> -ಸತೀಶ್ ಜಾರಕಿಹೊಳಿ, ಸಚಿವ



> ಕೋಮುವಾದಿ ಶಕ್ತಿಗಳು ಬಾಂಬ್ ಸಿಡಿಸಿ ಖುಷಿ ಪಡುವುದನ್ನು ಸಹಿಸಲು ಸಾಧ್ಯವಿಲ್ಲ. ಜೆಡಿಎಸ್ ಮೈತ್ರಿಯಿಂದ ಬಿಜೆಪಿಗೆ ಶಕ್ತಿ ಬಂದಿದೆ. ಬೂತ್ ಮಟ್ಟದಿಂದಲೂ ಕಾರ್ಯಕರ್ತರ ನಡುವೆ ಸಮನ್ವಯತೆ ಕಾಯ್ದುಕೊಳ್ಳಲಾಗಿದೆ. ಮೈತ್ರಿ ರಾಜ್ಯದ ಎಲ್ಲಾ 28 ಕ್ಷೇತ್ರಗಳಲ್ಲಿ ಬಿಜೆಪಿ ಗೆಲ್ಲಲಿದೆ. ನರೇಂದ್ರ ಮೋದಿ ಶೇ.20ರಷ್ಟು ಬಡವರನ್ನು ಬಡತನ ರೇಖೆಯಿಂದ ಮೇಲಕ್ಕೆತ್ತಿದ್ದಾರೆ. ಆರ್ಥಿಕ ಚೈತನ್ಯದಿಂದ ಬಡವರ ಕೊಳ್ಳುವ ಸಾಮರ್ಥ್ಯ ವೃದ್ಧಿಸಿದೆ.
> -ಆರಗ ಜ್ಞಾನೇಂದ್ರ, ಮಾಜಿ ಸಚಿವ



> ಪ್ರಧಾನಿ ನರೇಂದ್ರ ಮೋದಿ ಆಡಳಿತಾವಧಿಯಲ್ಲಿ ನಿರುದ್ಯೋಗದ ಪ್ರಮಾಣ ಶೇ 4.7% ರಷ್ಟು ಕಡಿಮೆಯಾಗಿದೆ. ತಂತ್ರಜ್ಞಾನ ಆಧರಿತ ನವೋದ್ಯಮಗಳಿಂದಾಗಿ, ಯುವಜನರಿಗೆ ಉದ್ಯೋಗ ದೊರಕಿದೆ. ಮೊದಲ ಬಾರಿಗೆ ಮತ ಚಲಾಯಿಸಲಿರುವ 1.84 ಕೋಟಿ ಯುವಜನರು ಮೋದಿಯವರ ಬಗ್ಗೆ ಒಳ್ಳೆಯ ಮಾತನಾಡುತ್ತಿದ್ದಾರೆ. ಅವರ ಉತ್ಸಾಹವನ್ನು ಕಾಂಗ್ರೆಸ್ಸಿಗೆ ಅರಗಿಸಿಕೊಳ್ಳಲು ಆಗುತ್ತಿಲ್ಲ.
> -ಹರೀಶ್ ಪೂಂಜ, ಶಾಸಕ



> ಕಾಂಗ್ರೆಸ್ ಸರಕಾರ ಯಾವುದೇ ರಸ್ತೆ, ಸೇತುವೆ ನಿರ್ಮಿಸಿಲ್ಲ ಅಭಿವೃದ್ಧಿ ನಡೆಯುತ್ತಿಲ್ಲ. ಮೋದಿಯವರನ್ನ ಮತ್ತೆ ಪ್ರಧಾನಿಯಾಗಿಸಲು ಜನರು ಉತ್ಸುಕರಾಗಿದ್ದಾರೆ. 500 ವರ್ಷಗಳಿಂದ ರಾಮ ಮಂದಿರ ಕೇವಲ ಕನಸಾಗಿತ್ತು ಆದರೆ ಇದು ಬಿಜೆಪಿಗೆ ಕೇವಲ ರಾಜಕೀಯ ಲಾಭ ನಷ್ಟ ವಿಚಾರವಲ್ಲ ಎಂಬುದು ಮಂದಿರ ಲೋಕಾರ್ಪಣೆ ಮಾಡಿದ ಬಳಿಕ ಸಾಬೀತಾಗಿದೆ. ದೇಶವೇ ಪ್ರಧಾನಿ ಮೋದಿಯವರ ಕೆಲಸವನ್ನು ಬೆಂಬಲಿಸುತ್ತಿದೆ.
> -ಡಾ. ಕೆ. ಸುಧಾಕರ್, ಮಾಜಿ ಸಚಿವ